# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 613 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 11-12-2023 |
| ಉತ್ತರಿಸುವ ಸಚಿವರು | : | ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅರಣ್ಯ ಒತ್ತುವರಿ ಪ್ರಕರಣಗಳಲ್ಲಿ ನಿಗದಿತ ಅವಧಿಯಲ್ಲಿ ಅರಣ್ಯ ಇಲಾಖೆಯು ಕಂದಾಯ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ಜಂಟಿ ಸರ್ವೆ ಮಾಡಿ ಪರಿಹಾರ ಹುಡುಕದ ಕಾರಣದಿಂದಾಗಿ ಹಲವಾರು ಅರ್ಹ ಅರಣ್ಯ ಒತ್ತುವರಿದಾರರಿಗೆ ಇಂದಿಗೂ ತೊಂದರೆಯಾಗುತ್ತಾ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ರಾಜ್ಯದಲ್ಲಿ ಅರಣ್ಯ ಒತ್ತುವರಿ ಸಮಸ್ಯೆ ಪರಿಹರಿಸುವ ಸಲುವಾಗಿ ಅರಣ್ಯ ಇಲಾಖೆಯು ಕಂದಾಯ ಇಲಾಖೆಯೊಂದಿಗೆ ಸೇರಿ ಈಗಾಗಲೇ ಜಂಟಿ ಸರ್ವೆ ನಡೆಸಿದೆಯೇ; | ದಿನಾಂಕ:27.04.1978ರ ಪೂರ್ವದ ಅರ್ಹ ಅರಣ್ಯ ಒತ್ತುವರಿ ಪ್ರಕರಣಗಳನ್ನು ಸಕ್ರಮಗೊಳಿಸುವ ಕುರಿತು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವಾಗ ಜಂಟಿ ಸರ್ವೆ ಕಾರ್ಯ ಕೈಗೊಂಡು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು.<br><br>ಕೇಂದ್ರ ಸರ್ಕಾರದ ಪರಿಸರ ಮತ್ತು ಅರಣ್ಯ ಸಚಿವಾಲಯ, ನವದೆಹಲಿ ರವರ ಪತ್ರ ಸಂ.:ನಂ.8-50/95-FC, ದಿನಾಂಕ:15.05.1996ರಲ್ಲಿ ದಿನಾಂಕ:27.04.1978ರ ಪೂರ್ವದ ಅರಣ್ಯ ಒತ್ತುವರಿಗಳನ್ನು ಷರತ್ತುಗಳೊಂದಿಗೆ, 19,348 ಪ್ರಕರಣಗಳಿಗೆ ಸಂಬಂಧಿಸಿದಂತೆ 14,848.83 ಹೆಕ್ಟೇರ್ ವಿಸ್ತೀರ್ಣವನ್ನು ಸಕ್ರಮಗೊಳಿಸಲು ಅನುಮೋದನೆ ನೀಡಿದೆ. |
| ಇ) | ನಡೆಸಿದಲ್ಲಿ, ಇಂದಿಗೂ ಅರ್ಹ ಅರಣ್ಯ ಒತ್ತುವರಿದಾರರ ಪ್ರಕರಣಗಳನ್ನು ಸಕ್ರಮಗೊಳಿಸದೇ ಇರಲು ಕಾರಣಗಳೇನು; | ದಿನಾಂಕ:27.04.1978ರ ಪೂರ್ವದಲ್ಲಿ ಅರಣ್ಯ ಒತ್ತುವರಿ ಪ್ರದೇಶಗಳನ್ನು ಸಕ್ರಮಗೊಳಿಸಲು ಕರ್ನಾಟಕ ಅರಣ್ಯ ಕಾಯ್ದೆ-1963ರ ಕಲಂ-28ರಲ್ಲಿ ಡಿ-ನೋಟಿಫೈ / ಡಿ-ರಿಸರ್ವ್ ಮಾಡಬೇಕಾಗಿರುತ್ತದೆ. ಆದರೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ: 13.11.2000ರ IA No. 2 in WP No. |
| ಈ) | ಅರ್ಹ ಅರಣ್ಯ ಒತ್ತುವರಿದಾರರ ಪ್ರಕರಣಗಳನ್ನು ಪರಿಹರಿಸುವ ಸಲುವಾಗಿ ಕೂಡಲೇ ಅರಣ್ಯ ಇಲಾಖೆ ಮತ್ತು ಕಂದಾಯ | |

| ಕ್ರ.ಸಂ | ಪ್ರಶ್ನೆ | ಉತ್ತರ |
| --- | --- | --- |
| | ಇಲಾಖೆಗಳನ್ನೊಳಗೊಂಡ ಜಂಟಿ ಮರು ಸರ್ವೆ ಮಾಡಿ, ಅರ್ಹ ಅರಣ್ಯ ಒತ್ತುವರಿದಾರರಿಗೆ ನ್ಯಾಯ ದೊರಕಿಸಿಕೊಡಲು ಸರ್ಕಾರ ಕೂಡಲೇ ಕ್ರಮ ವಹಿಸುವುದೇ? | 337/1995, and again re iterated by the Supreme Court on 09.02.2004 in IA No. 16 that "...Pending further orders, no de-reservation of Forest/ Sanctuaries/National Parks shall be effected" ಎಂದು ಆದೇಶಿಸಿರುತ್ತಾರೆ.<br><br>ಈ ಆದೇಶದ ಹಿನ್ನೆಲೆಯಲ್ಲಿ ಒತ್ತುವರಿಯಾದ ಅರಣ್ಯ ಪ್ರದೇಶಗಳನ್ನು ಸಕ್ರಮಗೊಳಿಸಲು ಕಾನೂನಾತ್ಮಕವಾಗಿ ಸಲಹೆಯನ್ನು ಪಡೆದು ಹಾಗೂ ಕೇಂದ್ರ ಸರ್ಕಾರದೊಂದಿಗೆ ಸಮಾಲೋಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಕೇಂದ್ರ ಸರ್ಕಾರದ ಪರಿಸರ ಮತ್ತು ಅರಣ್ಯ ಸಚಿವಾಲಯ, ನವದೆಹಲಿ ರವರ ಪತ್ರ ಸಂ.: ನಂ.8-50/95-FC, ದಿನಾಂಕ:15.05.1996 ಹಾಗೂ ರಾಜ್ಯ ಸರ್ಕಾರದ ಆದೇಶ ಸಂಖ್ಯೆ: ಎಫ್‌ಇಇ 5 ಎಫ್ ಜಿಎಲ್ 90, ಬೆಂಗಳೂರು, ದಿನಾಂಕ:05.05.1997 ರನ್ವಯ ಕೆಲವು ಷರತ್ತುಗಳನ್ನು ವಿಧಿಸಿ ಸಕ್ರಮಗೊಳಿಸಲು ಅನುಮತಿ ನೀಡಿರುವುದನ್ನು ಪರಿಗಣಿಸಿ, ಆಯಾ ಜಿಲ್ಲಾಧಿಕಾರಿಗಳು ಅರ್ಹ ಒತ್ತುವರಿದಾರರು ಹಾಗೂ ವಿಸ್ತೀರ್ಣವನ್ನು ಗುರುತಿಸ ಬೇಕಾಗಿರುತ್ತದೆ. ಆದರೆ ಕೆಲವು ಜಿಲ್ಲೆಗಳಲ್ಲಿ ಈ ಗುರುತಿಸಿವಿಕೆಯ ಕಾರ್ಯವು ಸಂಪೂರ್ಣ ಗೊಂಡಿರುವುದಿಲ್ಲ.<br><br>ಇದಲ್ಲದೇ, ಹಲವಾರು ಪ್ರಕರಣಗಳಲ್ಲಿ ಈ ಹಿಂದೆ ತಯಾರಿಸಿರುವ ಒತ್ತುವರಿದಾರರ ಜಮೀನಿನ ನಕ್ಷೆಯು ಹಾಗೂ ಅದರ ಸಂಪೂರ್ಣ ಮಾಹಿತಿ ಲಭ್ಯವಿರುವುದಿಲ್ಲ.<br><br>ದಿನಾಂಕ:27.04.1978ರ ಪೂರ್ವದ ಅರಣ್ಯ ಒತ್ತುವರಿಗಳಿಗೆ ಸಂಬಂಧಿಸಿದಂತೆ ಅರಣ್ಯ ಪ್ರದೇಶಗಳನ್ನು ಸಕ್ರಮಗೊಳಿಸುವ ಪ್ರದೇಶಗಳ ಪರ್ಯಾಯವಾಗಿ ಪರಿಹಾರಾತ್ಮಕ ನೆಡುತೋಪು ಪ್ರದೇಶಗಳನ್ನು ಅರಣ್ಯ ಇಲಾಖೆಗೆ ಹಸ್ತಾಂತರಿಸಿ ಪಹಣಿಯಲ್ಲಿ ಅರಣ್ಯ ಇಲಾಖೆ ಎಂದು ಇಂಡೀಕರಿಸಿ, ಸದರಿ ಪ್ರದೇಶವನ್ನು ಕರ್ನಾಟಕ ಅರಣ್ಯ ಕಾಯ್ದೆ-1963ರಡಿ ಮೀಸಲು/ರಕ್ಷಿತ ಅರಣ್ಯ ಎಂದು ಅಧಿಸೂಚಿಸಬೇಕಾಗಿರುತ್ತದೆ. ಇದರೊಂದಿಗೆ, ಪರಿಹಾರಾತ್ಮಕ ನೆಡುತೋಪು ಪ್ರದೇಶಗಳಲ್ಲಿ ನೆಡುತೋಪುಗಳನ್ನು ಬೆಳೆಸಲು ಕ್ರಮ |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| | | ಕೈಗೊಳ್ಳಬೇಕಾಗಿರುತ್ತದೆ.<br><br>ಇದಲ್ಲದೇ, ಈ ಮೇಲೆ ನಮೂದಿಸಿರುವ ಕೇಂದ್ರ ಸರ್ಕಾರದ ಆದೇಶದಲ್ಲಿ ಕೆಲವೊಂದು ಷರತ್ತುಗಳನ್ನು ಕ್ಷೇತ್ರಮಟ್ಟದಲ್ಲಿ ಅನುಷ್ಠಾನಗೊಳಿಸಲು ಕಷ್ಟಸಾಧ್ಯವಾಗಿರುತ್ತದೆ.<br>ಆದ್ದರಿಂದ ಮೇಲೆ ನಮೂದಿಸಿರುವ ಅಂಶಗಳ ಹಿನ್ನಲೆಯಲ್ಲಿ ಕೇಂದ್ರ ಸರ್ಕಾರದೊಂದಿಗೆ ಸಮಾಲೋಚನೆ ನಡೆಸಿ, ಕಾನೂನು ಅಡಿಯಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ: ಎಫ್‌ಇಇ 73 ಎಫ್‌ಜಿಎಲ್ 2023**

Belandr

**(ಈಶ್ವರ ಬಿ ಖಂಡ್ರೆ)**
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ
ಸಚಿವರು